# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 608 |
| ಸದಸ್ಯರ ಹೆಸರು | : | ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 13.12.2024. |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ; ಇವುಗಳಲ್ಲಿ ಎಷ್ಟು ಮಕ್ಕಳು ಕಲಿಯುತ್ತಿದ್ದಾರೆ; ಈ ಅಂಗನವಾಡಿ ಕೇಂದ್ರಗಳಲ್ಲಿ ವಿದ್ಯುತ್, ಫ್ಯಾನ್, ಶೌಚಾಲಯ ಹಾಗೂ ಇನ್ನಿತರೆ ಮೂಲ ಸೌಕರ್ಯಗಳಿಲ್ಲದೇ ಇರುವ ಅಂಗನವಾಡಿ ಕೇಂದ್ರಗಳೆಷ್ಟು; ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು ಯಾವ ಕ್ರಮ ಕೈಗೊಳ್ಳಲಾಗಿದೆ;</td><td>ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 3420 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಅಂಗನವಾಡಿ ಕೇಂದ್ರಗಳಲ್ಲಿ 93151 ಮಕ್ಕಳು ಕಲಿಯುತ್ತಿದಾರೆ. ಹಾಗೂ ಈ ಅಂಗನವಾಡಿ ಕೇಂದ್ರಗಳಲ್ಲಿ ವಿದ್ಯುತ್, ಫ್ಯಾನ್, ಶೌಚಾಲಯ ಹಾಗೂ ಇನ್ನಿತರೆ ಮೂಲ ಸೌಕರ್ಯಗಳಿಲ್ಲದೇ ಇರುವ ಕೇಂದ್ರಗಳ ಸಂಖ್ಯೆ ಮತ್ತು 2024-25 ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತಿಯ ಲಿಂಕ್ ಡಾಕ್ಯೂಮೆಂಟ್ ಯೋಜನೆಯಡಿ ಮೂಲಭೂತ ಸೌಕರ್ಯ ಕಲ್ಪಿಸಲು ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್ ರವರಿಗೆ ಸಲ್ಲಿಸಿರುವ ಪ್ರಸ್ತಾವನೆಯ ವಿವರ ಈ ಕೆಳಗಿನಂತಿದೆ.<br><br>
<table>
<tr><th></th><th>ಶೌಚಾಲಯ</th><th>ವಿದ್ಯುತ್</th><th>ಫ್ಯಾನ್</th></tr>
<tr><td>ಮೂಲಭೂತ ಸೌಕರ್ಯಗಳಿಲ್ಲದೇ ಇರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ</td><td>525</td><td>640</td><td>112</td></tr>
<tr><td>ಪ್ರಸ್ತಾವನೆ ಸಲ್ಲಿಸಲಾದ ಅಂಗನವಾಡಿ ಕೇಂದ್ರಗಳ ಸಂಖ್ಯೆ</td><td>129</td><td>241</td><td>112</td></tr>
</table>
<br>ಉಳಿದ ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕೆ.ಕೆ.ಆರ್.ಡಿ.ಬಿ ಯೋಜನೆಯಡಿ ಜಿಲ್ಲಾಧಿಕಾರಿಗಳ ಮೂಲಕ ಪ್ರಸ್ತಾವನೆ ಸಲ್ಲಿಸಲು ಉಪ ನಿರ್ದೇಶಕರಿಗೆ ಸೂಚಿಸಲಾಗಿದೆ.<br><br>ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 1568 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಅಂಗನವಾಡಿ ಕೇಂದ್ರಗಳಲ್ಲಿ 55121 ಮಕ್ಕಳು ಕಲಿಯುತ್ತಿದಾರೆ. ಹಾಗೂ ಈ ಅಂಗನವಾಡಿ ಕೇಂದ್ರಗಳಲ್ಲಿ ವಿದ್ಯುತ್, ಫ್ಯಾನ್, ಶೌಚಾಲಯ ಹಾಗೂ ಇನ್ನಿತರೆ ಮೂಲ ಸೌಕರ್ಯಗಳಿಲ್ಲದೇ ಇರುವ ಕೇಂದ್ರಗಳ ಸಂಖ್ಯೆ ಮತ್ತು 2024-25 ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತಿಯ ಲಿಂಕ್ ಡಾಕ್ಯೂಮೆಂಟ್ ಯೋಜನೆಯಡಿ ಮೂಲಭೂತ ಸೌಕರ್ಯ ಕಲ್ಪಿಸಲು ಸಲ್ಲಿಸಿರುವ ಪ್ರಸ್ತಾವನೆಯ ವಿವರ ಈ ಕೆಳಗಿನಂತಿದೆ.</td></tr>
</table>

| | ಶೌಚಾಲಯ | ವಿದ್ಯುತ್ | ಫ್ಯಾನ್ |
|---|---|---|---|
| **ಮೂಲಭೂತ ಸೌಕರ್ಯಗಳಿಲ್ಲದೇ ಇರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ** | 148 | 53 | 53 |
| **ಪ್ರಸ್ತಾವನೆ ಸಲ್ಲಿಸಲಾದ ಅಂಗನವಾಡಿ ಕೇಂದ್ರಗಳ ಸಂಖ್ಯೆ.** | 27 | 24 | 24 |

ಉಳಿದ ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಜಿಲ್ಲಾ ಮತ್ತು ತಾಲ್ಲೂಕಿನ ಅನಿರ್ಬಂಧಿತ ಯೋಜನೆಯಡಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್ ರವರಿಗೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸುವುದಾಗಿ ಉಪನಿರ್ದೇಶಕರು ಯಾದಗಿರಿ ರವರು ತಿಳಿಸಿರುತ್ತಾರೆ.

| | | |
|---|---|---|
| ಆ) | ಸದರಿ ಜಿಲ್ಲೆಗಳಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಪ್ರತ್ಯೇಕ ಅಡುಗೆ ಕೋಣೆಗಳಿಲ್ಲದೆ ಒಂದೇ ಕೋಣೆಯ ಒಂದು ಮೂಲೆಯಲ್ಲಿ ಮಕ್ಕಳನ್ನು ಕೂರಿಸಿ ಮತ್ತೊಂದು ಮೂಲೆಯಲ್ಲಿ ಸಿಲಿಂಡರ್ ಹಚ್ಚಿ ಅಡುಗೆ ತಯಾರಿಸುತ್ತಿದ್ದು, ಇದರಿಂದ ಅವಘಡ ಸಂಭವಿಸುವ ಸಾಧ್ಯತೆ ಇರುವುದರಿಂದ, ಇದಕ್ಕೆ ಸರ್ಕಾರವೇ ನೇರ ಹೊಣೆಯಾಗಲಿದ್ದು, ಸರ್ಕಾರ ಇದರ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವುದೇ? | ಕಲಬುರಗಿ ಜಿಲ್ಲೆಯಲ್ಲಿ ಪ್ರತ್ಯೇಕ ಅಡುಗೆ ಕೋಣೆಗಳಿಲ್ಲದ 62 ಅಂಗನವಾಡಿ ಕೇಂದ್ರಗಳಲ್ಲಿ ಅಡುಗೆ ತಯಾರಿಸಲು ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಹಾಗೂ ಸದರಿ ಕೇಂದ್ರಗಳಿಗೆ ಅಂಗನವಾಡಿ ಕಟ್ಟಡ ನಿರ್ಮಾಣಕ್ಕಾಗಿ ನಿವೇಶನ ಗುರುತಿಸಲಾಗಿದ್ದು, ಅಂಗನವಾಡಿ ಕಟ್ಟಡ ಮಂಜೂರಾತಿಗಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>ಯಾದಗಿರಿ ಜಿಲ್ಲೆಯಲ್ಲಿ ಪ್ರತ್ಯೇಕ ಅಡುಗೆ ಕೋಣೆಗಳಿಲ್ಲದ 51 ಅಂಗನವಾಡಿ ಕೇಂದ್ರಗಳು ಪರ್ಯಾಯವಾಗಿ ಶಾಲಾ ಕಟ್ಟಡ, ಸಮುದಾಯ ಭವನ ಮತ್ತು ಇತರೆ ಸರ್ಕಾರಿ ಕಟ್ಟಡಗಳಲ್ಲಿ ಕಾರ್ಯನಿವಹಿಸುತ್ತಿವೆ. ಸದರಿ ಅಂಗನವಾಡಿ ಕೇಂದ್ರಗಳಿಗೆ ನಿವೇಶನ ಹಾಗೂ ಅನುದಾನದ ಆಧಾರದ ಮೇರೆಗೆ ಹಂತ ಹಂತವಾಗಿ ಸ್ವಂತ ಕಟ್ಟಡ ನಿರ್ಮಿಸಲು ಕ್ರಮವಹಿಸಲಾಗುವುದು.<br><br>ಅಂಗನವಾಡಿ ಕೇಂದ್ರಗಳ ನಿರ್ವಹಣೆ ಯೋಜನೆಯಡಿ ಸದರಿ ಅಂಗನವಾಡಿ ಕೇಂದ್ರಗಳಿಗೆ ಅಡುಗೆ ಕೋಣೆ ನಿರ್ಮಿಸಲು ಕ್ರಮವಹಿಸಲಾಗುವುದು. ಮತ್ತು ಒಂದೇ ಕೋಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ತೊಂದರೆಯಾಗದ ರೀತಿಯಲ್ಲಿ ಮುಂಜಾಗ್ರತಾ ಕ್ರಮ ಹಾಗೂ ಜಾಗ್ರತೆವಹಿಸುವಂತೆ ಎಲ್ಲಾ ಜಿಲ್ಲೆಗಳಿಗೆ ಸೂಚಿಸಲಾಗಿದೆ. |

ಮಮಇ 303 ಐಸಿಡಿ 2024

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು